ಐ.ಟಿ.ಐ. ಕಾಲೇಜುಗಳಿಗೆ ಕಟ್ಟಡಗಳು ಇಲ್ಲದಿರುವ ಬಗ್ಗೆ

36 (14) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕುಗಳಲ್ಲಿ ಐ.ಟಿ.ಐ. ಕಾಲೇಜುಗಳು ಪ್ರಾರಂಭವಾಗಿದ್ದು ಕಟ್ಟಡಗಳು ಪ್ರಾಧ್ಯಾಪಕರು ಮತ್ತು ಸಿಬ್ಬಂದಿಗಳು ಇಲ್ಲದೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಗೂ ಹಿಂದುಳಿದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಸಮಸ್ಯೆಯನ್ನು ಹೋಗಲಾಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು) :

ಅ) ಹೌದು.

ಬಾಗೇಪಲ್ಲಿಯಲ್ಲಿ 7707.96 ಚದರಡಿಗಳ ಒಂದು ಖಾಸಗಿ ಕಟ್ಟಡ ಮತ್ತು ಗುಡಿಬಂಡೆಯಲ್ಲಿ ಒಟ್ಟು 6030.84 ಚದರಡಿಗಳ ಎರಡು ಖಾಸಗಿ ಕಟ್ಟಡಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ಅಗತ್ಯ ಸಿಬ್ಬಂದಿ ಹಾಗೂ ಸೌಲಭ್ಯಗಳನ್ನು ಒದಗಿಸಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ನಡೆಸಲಾಗುತ್ತಿದೆ.

ಆ) ಕೈಗಾರಿಕಾ ತರಬೇತಿ ಸಂಸ್ಥೆ, ಬಾಗೇಪಲ್ಲಿ ಇಲ್ಲಿಗೆ 18 ಹುದ್ದೆಗಳು ಈಗಾಗಲೇ ಮಂಜೂರಾಗಿದ್ದು, ಪ್ರಸ್ತುತ 11 ಸಿಬ್ಬಂದಿ ವರ್ಗದವರು ಕಾರ್ಯ ನಿರ್ವಹಿಸುತ್ತಿದ್ದಾರೆ, ಜೊತೆಯಲ್ಲಿ 02 ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯಲಾಗುತ್ತಿದೆ. ಕೈಗಾರಿಕಾ ತರಬೇತಿ ಸಂಸ್ಥೆ, ಗುಡಿಬಂಡೆ ಇಲ್ಲಿಗೆ ದಿನಾಂಕ: 22-02-2012ರ ಸರ್ಕಾರಿ ಆದೇಶದಲ್ಲಿ 15 ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ ಅತಿಥಿ ಬೋಧಕರು ಸೇರಿದಂತೆ 10 ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಇವೆರಡು ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ವರ್ಗಾವಣೆ ಮತ್ತು ಮುಂಬಡ್ತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. ಬಾಗೇಪಲ್ಲಿಯಲ್ಲಿ ರೂ. 300.00 ಲಕ್ಷ ವೆಚ್ಚದಲ್ಲಿ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ 7.23 ಎಕರೆ ನಿವೇಶನ ಮಂಜೂರಾಗಿರುತ್ತದೆ. ಗುಡಿಬಂಡೆಯಲ್ಲಿ 1.5 ಎಕರೆ ಸರ್ಕಾರಿ ಜಮೀನು ಮಂಜೂರಾಗಿದ್ದು, ಸದರಿ

ಜಮೀನನ್ನು ಸಂಸ್ಥೆಯ ವಶಕ್ಕೆ ಪಡೆಯಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಅನುದಾನದ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣಕ್ಕೆ ಕ್ರಮ ತೆಗೆದುಕೊಳ್ಳಲಾಗುವುದು.

ಬಾಗೇಪಲ್ಲಿ ಸಂಸ್ಥೆಯಲ್ಲಿ ಅಗತ್ಯ ಯಂತ್ರೋಪಕರಣಗಳು ಹಾಗೂ ಸಲಕರಣೆಗಳು ಲಭ್ಯವಿರುತ್ತದೆ. ಗುಡಿಬಂಡೆ ಸಂಸ್ಥೆಯಲ್ಲಿ ಡ್ರೆಸ್ ಮೇಕಿಂಗ್ ವೃತ್ತಿಗೆ ಪ್ರವೇಶವಾಗದ ಕಾರಣ ಈ ವೃತ್ತಿಯನ್ನು ಹೊರತುಪಡಿಸಿ ಉಳಿದ ಎಲ್ಲಾ ವೃತ್ತಿಗಳಿಗೆ ಅಗತ್ಯ ಯಂತ್ರೋಪಕರಣ ಸಲಕರಣೆಗಳನ್ನು ಈಗಾಗಲೇ ಒದಗಿಸಲಾಗಿದೆ.

ವಿಷ್ಣು ಸಮುದ್ರ ಕೆರೆ

32 (03) ಶ್ರೀ ರುದ್ರೇಶ್ ಗೌಡ. ವೈ.ಎನ್. (ಬೇಲೂರು) : ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರಿನಲ್ಲಿರುವ ಪ್ರಖ್ಯಾತ ವಿಷ್ಣು ಸಮುದ್ರ ಕೆರೆಯು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿರುವುದು ನಿಜವೇ?

ಆ) ಈ ಕೆರೆಯಲ್ಲಿ ವಿಶ್ವಪ್ರಸಿದ್ಧ ಶ್ರೀ ಚನ್ನಕೇಶವ ದೇವಸ್ಥಾನದ ಭಕ್ತಾದಿಗಳಿಗೆ ಸ್ನಾನಕ್ಕಾಗಿ ಸರ್ಕಾರ ಸ್ನಾನಘಟ್ಟ ನಿರ್ಮಿಸಿರುವುದು ನಿಜವೇ?

ಇ) ಹಾಗಿದ್ದಲ್ಲಿ, ಈ ಸ್ನಾನಘಟ್ಟದಲ್ಲಿರುವ ನೀರು ಮಲೀನ ಗೊಂಡಿದ್ದು, ಸ್ನಾನಕ್ಕೆ ಯೋಗ್ಯವಾಗಿಲ್ಲದಿರುವುದು ನಿಜವೇ? ಈ ಕೊಳದಲ್ಲಿ ಹೂಳು ತುಂಬಿದ್ದು, ಪ್ರವಾಸಿಗರ ಸ್ನಾನಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ (ವಿವರ ಒದಗಿಸುವುದು);

ಈ) ಬಂದಿದ್ದಲ್ಲಿ, ಈ ಕೊಳದ ಅಭಿವೃದ್ಧಿಗೆ ಶಾಶ್ವತ ಯೋಜನೆ ರೂಪಿಸುವುದು ಸರ್ಕಾರದ ಕರ್ತವ್ಯ ಅಲ್ಲವೇ? ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

ಅ) ಬೇಲೂರಿನಲ್ಲಿರುವ ಪ್ರಖ್ಯಾತ ವಿಷ್ಣು ಸಮುದ್ರ ಕೆರೆಯು ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಒಳಪಟ್ಟಿರುತ್ತದೆ.